**ಅಸಲು ದಾವಾ ನಂಃ 87/2013**
**ಡಿ.ಡಬ್ಲ್ಯೂಃ 01**

**<u>ದಿನಾಂಕಃ 22.03.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು: ಶ್ರೀ ಎ.ಬಿ., ವಾದಿ ಪರ ವಕೀಲರಿಂದ</u>**

ವಾದಿಯ ವಿವಾಹವು 1987 ನೇ ಇಸ್ವಿಯಲ್ಲಿ ನಡೆದಿರುತ್ತದೆ. ವಾದಿಯ ಮದುವೆ ಸಮಯದಲ್ಲಿ ನನ್ನ ಅಜ್ಜ ಅಜ್ಜಿ ಜೀವಂತವಾಗಿದ್ದರು. ಮದುವೆಯ ಸಮಯದಲ್ಲಿ ವರೋಪಚಾರಕ್ಕಾಗಿ ವಸ್ತುಗಳನ್ನು ಕೊಡುವುದಕ್ಕೆ ಸಂಬಂಧಿಸಿದಂತೆ ಒಪ್ಪಂದ ಮಾಡಿಕೊಳ್ಳುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರಿದು ಕರಾರು ಪತ್ರವನ್ನು ಬರೆದು ಕೊಡಲಾಗಿತ್ತು ಎಂದು ನುಡಿಯುತ್ತಾರೆ. ನಿಡಿ.1 ರಲ್ಲಿ ನನ್ನ ಅಜ್ಜ ಅಜ್ಜಿಯ ಸಹಿ ಮಾಡಲಾಗಿದೆಯೇ ಎಂದರೆ ಸಾಕ್ಷಿಯು ನನ್ನ ಅಜ್ಜಿ ಸಹಿ ಮಾಡಿರುತ್ತಾರೆ. ನನ್ನ ಅಜ್ಜ ವಾದಿಯ ಮದುವೆಯಾದ 2 ವರ್ಷಗಳ ನಂತರ ಮೃತರಾಗಿದ್ದ ಕಾರಣ ಸಹಿಯನ್ನು ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ನಿಡಿ.1 ಕ್ಕೆ ಮದುವೆಗೆ ಸಂಬಂಧಿಸಿದ ಕರಾರು ಪತ್ರ ಎಂದರೆ ಸರಿ. ನಿಡಿ.1 ರಲ್ಲಿ ಜಮೀನಿಗೆ ಸಂಬಂಧಿಸಿದಂತೆ ನಮೂದು ಮಾಡಿರುವುದಿಲ್ಲ. ಸ್ಥಿರ ಆಸ್ತಿಗೆ ಸಂಬಂಧಿಸಿದಂತೆ ಬೇರೆ ಯಾವುದೇ ಪಾಲು ವಿಭಾಗ ಪತ್ರ ಆಗಿಲ್ಲ ಎಂದರೆ ಸರಿ.

2005 ರಲ್ಲಿ ಒಂದು ಆಸ್ತಿಯನ್ನು ಮಾರಾಟ ಮಾಡಲಾಗಿತ್ತು ಎಂದರೆ ಸರಿ. ನಿಪಿ.13 ರ ಸುಳ್ಳು ದಾಖಲೆಯನ್ನು ಸೃಷ್ಟಿಸಿ ಅಂದರೆ ಪಾಲು ವಿಭಾಗ ಆಗಿದೆ ಎಂದು ಸುಳ್ಳು ದಾಖಲೆಯನ್ನು ಸೃಷ್ಟಿಸಿ ವಾದಿಗೆ ಪಾಲನ್ನು ಕೊಡಬಾರದೆಬ ಉದ್ದೇಶದಿಂದ ಮಾರಾಟ ಮಾಡಲಾಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಲ್ಲಿ ಪಾಲು ವಿಭಾಗ ಆಗಿರದ ಕಾರಣ ವಾದಿಗೆ ½ ಭಾಗ ಹಿಸ್ಸಾ ಹಕ್ಕು ಇರುತ್ತದೆ ಎಂದರೆ ಸಾಕ್ಷಿಯು ಮದುವೆ ಸಮಯದಲ್ಲಿ ಎಲ್ಲವನ್ನೂ ಕೊಡಲಾಗಿದೆ ಎಂದು ನುಡಿಯುತ್ತಾರೆ. ನಿಡಿ.1 ರಲ್ಲಿರುವ ಸಾಕ್ಷಿದಾರರು ಮೃತರಾಗಿರುವ ಕಾರಣ ಸಾಕ್ಷಿ ವಿಚಾರಣೆ ಮಾಡಲು ಆಗುವುದಿಲ್ಲ.

**ಮರು ವಿಚಾರಣೆ ಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

C/c ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.